<u>ದಿನಾಂಕಃ 28-11-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.</u>

<u>ಮುಂದುವರೆದ ಮುಖ್ಯ ವಿಚಾರಣೆ:</u> ಅರ್ಜಿದಾರರ ಪರ ವಕೀಲರಾದ ಶ್ರೀ.ಬಿ.ಹೆಚ್.ಬಿ ವಕೀಲರು ಮುಂದುವರೆದ ಮುಖ್ಯ ವಿಚಾರಣೆ ಏನು ಇಲ್ಲಾ ಎಂದು ನುಡಿದಿರುತ್ತಾರೆ.

ಅರ್ಜಿಯಲ್ಲಿ ಕೋರಿ ಕೊಂಡಂತೆ ಆದೇಶ ಆಗಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

<u>ಪಾಟೀ ಸವಾಲುಃ 3 ನೇ ಎದುರುದಾರರ ಪರ ಶ್ರೀ.ಆರ್.ಎಸ್.ಎಸ್.ವಕೀಲರಿಂದಃ</u>

ಅಪಘಾತದ ಸಮಯದಲ್ಲಿ ಮೋಟಾರ್ ಸೈಕಲ್ ನಂ.ಕೆಎ.04/ಜೆ.ಕೆ.9650 ರ ವಾಹನವನ್ನು ನಾನೇ ಚಲಾಯಿಸುತ್ತಿದ್ದೆ, ಆ ಮೋಟಾರ್ ಸೈಕಲ್ ನನ್ನ ಸ್ನೇಹಿತನಾದ 4 ನೇ ಎದುರುದಾರನಿಗೆ ಸಂಬಂಧಪಟ್ಟಿದ್ದಾಗಿರುತ್ತದೆ. ಅಪಘಾತ ನನ್ನ ತಪ್ಪಿನಿಂದಲೇ ಆಗಿದೆ ಎಂದು ಪೋಲಿಸರು ನನ್ನ ವಿರುದ್ಧವೇ ಕೇಸು ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-8 ರ ಅಂತಿಮ ವರದಿಯಲ್ಲಿ ನನ್ನನ್ನು 1 ನೇ ಆರೋಪಿಯೆಂದು ತೋರಿಸಿರುತ್ತಾರೆ ಎಂದರೆ ಸರಿ. ಅಪಘಾತ ನನ್ನ ತಪ್ಪಿನಿಂದಲೇ ಆಗಿರುತ್ತದೆ ಎಂದರೆ ಸರಿಯಲ್ಲ. 1 ನೇ ಎದುರುದಾರರ ತಪ್ಪಿನಿಂದ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ.

ಅಪಘಾತದಲ್ಲಿ ನನಗೆ ಯಾವುದೇ ಮೂಳೆ ಮುರಿತವಾಗಿರುವುದಿಲ್ಲ ಎಂದರೆ ಸರಿಯಲ್ಲ. ವೈದ್ಯರು ನನ್ನನ್ನು ಪರೀಕ್ಷೆ ಮಾಡಿ ನಿಪಿ-7 ರಲ್ಲಿ ನನಗೆ ಸಾದಾ ಸ್ವರೂಪದ ಗಾಯಗಳಾಗಿರುತ್ತವೆ ಎಂದು ನಮೂದು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-3 ರ ಡಿಸರ್ಚಾಜ ಸಮರಿಯ ಪ್ರಕಾರವೂ ನನಗೆ ಸಾದಾ ಸ್ವರೂಪದ ಗಾಯಗಳಾಗಿರುತ್ತವೆ ಎಂದು ನಮೂದು ಇರುತ್ತದೆ ಎಂದರೆ ಸರಿಯಲ್ಲ. ನಾನು ಎರಡು ತಿಂಗಳು ಚಿಕಿತ್ಸೆ ಪಡೆದು ಚಿಕಿತ್ಸೆಗೆ 2 ಲಕ್ಷ 50 ಸಾವಿರ ಖರ್ಚು ಮಾಡಿ ಇನ್ನೂ ಒಂದು ಲಕ್ಷ ಚಿಕಿತ್ಸೆಗೆ ಬೇಕು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಸಾದಾ

ಗಾಯವಾಗಿದ್ದು ನಾನು ಈಗ ಸಂಪೂರ್ಣವಾಗಿ ಗುಣಮುಖನಾಗಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ಕೆಎ.35/ಎಸ್.7668 ರ ಮೋಟಾರ್ ಸೈಕಲ್ ಚಾಲಕನಿಗೆ ಚಾಲನಾ ಪರವಾನಿಗೆ ಪತ್ರ ಇರಲಿಲ್ಲ ಎಂದರೆ ಸಾಕ್ಷಿ ನನಗೆ ಮಾಹಿತಿ ಇಲ್ಲ ಎಂದು ಹೇಳುತ್ತಾರೆ. ನಿಪಿ-7 ಅಂತಿಮ ವರದಿಯಲ್ಲಿ ಸದರಿ ವಾಹನದ ಚಾಲಕನಿಗೆ ಡಿ.ಎಲ್ ಇರಲಿಲ್ಲ ಎಂದು ನಮೂದು ಮಾಡಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ.

ಅಪಘಾತದ ಸಮಯದಲ್ಲಿ ನನಗೆ 41 ವರ್ಷ ವಯಸ್ಸು ಆಗಿತ್ತು ಎಂದರೆ ಸಾಕ್ಷಿ 35 ವರ್ಷ ಆಗಿತ್ತು ಎಂದು ಹೇಳುತ್ತಾರೆ. ನನಗೆ ಕ್ಷೌರಿಕ ಕೆಲಸದಿಂದ ವರ್ಷಕ್ಕೆ 39 ಸಾವಿರ ಸಂಬಳ ಇತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಸಾದಾ ಗಾಯವಾಗಿದ್ದರಿಂದ ಕಲಂ.163(ಎ) ಐ.ಎಂ.ಆ್ಯಕ್ಟ ನ ಅಡಿಯಲ್ಲಿ ಅರ್ಜಿ ಸಲ್ಲಿಸಲು ಬರುವುದಿಲ್ಲ ಎಂದರೆ ಸರಿಯಲ್ಲ. ವಾಹನವನ್ನು ನಾನೇ ಚಾಲಾಯಿಸುತ್ತಿದ್ದು ನನ್ನ ವಿರುದ್ಧವೇ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದರಿಂದ ಈ ಅರ್ಜಿ ಸಲ್ಲಿಸಲು ಬರುವುದಿಲ್ಲ ಎಂದರೆ ಸರಿಯಲ್ಲ.

ಮೇಲೆ ಹೇಳಿದ ಕಾರಣಗಳಿಗಾಗಿ 3 ನೇ ಎದುರುದಾರರು ಯಾವುದೇ ಪರಿಹಾರ ಕೊಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 5 ನೇ ಎದುರುದಾರರ ಪರ ಶ್ರೀ.ವಿ.ಎಸ್.ಎ.ವಕೀಲರಿಂದಃ**

ಮೋಟಾರ್ ಸೈಕಲ್ ಚಲಾಯಿಸಲು ನನಗೆ ಪರವಾನಿಗೆ ಇರುತ್ತದೆ. ಡಿ.ಎಲ್ ನ್ನು ನಾನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸಾಕ್ಷಿ ನಾನು ವಕೀಲರಿಗೆ ಕೊಟ್ಟಿದ್ದೆ ಎಂದು ಹೇಳುತ್ತಾರೆ. ನನಗೆ ಯಾವುದೇ ಲೈಸನ್ಸ ಇರಲಿಲ್ಲ ಎಂದರೆ ಸರಿಯಲ್ಲ. ಪೋಲಿಸರು ನನ್ನ ವಿರುದ್ಧವೇ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದರಿಂದ

ಕಾಯ್ದೆಯ ಪ್ರಕಾರ ನಾನು ಈ ಅರ್ಜಿ ಸಲ್ಲಿಸಲು ಬರುವುದಿಲ್ಲ ಎಂದರೆ ಸರಿಯಲ್ಲ. ಆದ್ದರಿಂದ 5 ನೇ ಎದುರುದಾರರು ಯಾವುದೇ ಪರಿಹಾರ ಕೊಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.